ವಾಸ್ತವಿಕ ಇಳುವರಿ ಹಾಗೂ ಇಳುವರಿಯ ಕೊರತೆಯಲ್ಲಿ ವ್ಯತ್ಯಾಸವಿರುವುದರಿಂದ, ತಾಲ್ಲೂಕಿನಿಂದ ತಾಲ್ಲೂಕಿಗೆ ಮತ್ತು ಹೋಬಳಿಯಿಂದ ಹೋಬಳಿಗೆ ಬೆಳೆ ವಿಮಾ ನಷ್ಟ ಪರಿಹಾರ ಇತ್ಯರ್ಥ ಪಡಿಸುವಲ್ಲಿ ವ್ಯತ್ಯಾಸವಿರುತ್ತದೆ.

ಆ) ಉದ್ಭವಿಸುವುದಿಲ್ಲ.

627(1244) ಶ್ರೀ ಶಿವರಾಜ ಸಜ್ಜನರ್ (ಹಾವೇರಿ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2003–04ರ ಹಿಂಗಾರು ಬೆಳೆವಿಮೆ ರೈತರಿಗೆ ಕೊಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು)

ಅ) ಹೌದು.

ಆ) 2003–04 ಹಿಂಗಾರು ಬೇಸಿಗೆ ಹಂಗಾಮಿನ ಒಟ್ಟು ಬೆಳೆ ವಿಮಾ ನಷ್ಟ ಪರಿಹಾರದ ಮೊತ್ತವಾದ ರೂ. 221.34 ಕೋಟಿಗಳನ್ನು ಇತ್ಯರ್ಥಪಡಿಸಲು ರಾಜ್ಯ ಸರ್ಕಾರದ ಪಾಲಿನ ಹಣವನ್ನು ಬಿಡುಗಡೆ ಮಾಡಲು ದಿನಾಂಕ 3–1–2005ರಂದು ಭಾರತೀಯ ಕೃಷಿ ವಿಮಾ ಕಂಪನಿ ನಿಯಮಿತ ಸಂಸ್ಥೆಯು ಕೋರಿದ್ದು, ರಾಜ್ಯ ಸರ್ಕಾರದ ಪಾಲಾದ ರೂ. 102.46 ಕೋಟಿಗಳನ್ನು ಬಿಡುಗಡೆ ಮಾಡಲು ಸರ್ಕಾರವು ಕ್ರಮ ಕೈಗೊಂಡಿದ್ದು, ರೈತರಿಗೆ ಬೆಳೆ ವಿಮಾ ನಷ್ಟ ಪರಿಹಾರ ವಿತರಿಸಲಾಗುವುದು.

628(1245) ಶ್ರೀ ಶಿವರಾಜ್ ಸಜ್ಜನರ್ (ಹಾವೇರಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದ ಕೆ.ಸಿ.ಸಿ. ಬ್ಯಾಂಕ್ ಪುನಶ್ಚೇತನಗೊಳಿಸುವ ವಿಚಾರ ಸರಕಾರಕ್ಕಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ಇದೆ.

ಆ) ಪುನ:ಶ್ಚೇತನಕ್ಕಾಗಿ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:

1. ಧಾರವಾಡ ಕೆ.ಸಿ.ಸಿ. ಬ್ಯಾಂಕಿನ ಪುನಶ್ಚೇತನ ಸರ್ಕಾರವು ಆದೇಶ ಸಂಖ್ಯೆ: ಸಿಎಂಡಬ್ಲ್ಯೂ 293 ಸಿಸಿಬಿ 2003, ದಿನಾಂಕ 15–9–2003ರ ರೀತ್ಯಾ 25 ಕೋಟಿ ರೂ.ಗಳನ್ನು ದಿನಾಂಕ 30–6–2003ಕ್ಕೆ ಬಾಕಿಯಿರುವ ಎಲ್ಲಾ ಸುಸ್ತಿ ಬೆಳೆ ಮತ್ತು ಮಧ್ಯಮಾವಧಿ ಸಾಲಗಳ ಮೇಲಿನ ಪೂರ್ತಿ ಬಡ್ಡಿಯನ್ನು ಮನ್ನಾ ಮಾಡಲು ಮಂಜೂರಾತಿ ನೀಡಿದೆ. ಈ ಸಂಬಂಧ ನಷ್ಟವನ್ನು ಸರ್ಕಾರ ಅಪೆಕ್ಸ್ ಬ್ಯಾಂಕ್